ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 14-11-2018

## ಪತ್ರಿಕಾ ಆಮಂತ್ರಣ

1. ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತಿಗೆ ಪ್ರಥಮ ಬಾರಿಗೆ ಆಯ್ಕೆಯಾದ ಶಾಸಕರುಗಳಿಗೆ "ತರಬೇತಿ ಶಿಬಿರ"

   ಉದ್ಘಾಟನೆ:
   ಬಸವರಾಜ ಎಸ್. ಹೊರಟ್ಟಿ, ಮಾನ್ಯ ಸಭಾಪತಿಗಳು
   ಹಾಗೂ
   ಕೆ.ಆರ್. ರಮೇಶ್ ಕುಮಾರ್, ಮಾನ್ಯ ಸಭಾಧ್ಯಕ್ಷರು.

   ದಿನಾಂಕ: 15–11–2018, ಗುರುವಾರ ಸಮಯ: ಬೆಳಿಗ್ಗೆ 10–00 ಗಂಟೆಗೆ.

   ಸ್ಥಳ: ಕೊಠಡಿ ಸಂಖ್ಯೆ 419, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು

2. ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ (ನವೆಂಬರ್ 14 ರಿಂದ 20 ರವರೆಗೆ)
   ಪುಸ್ತಕ ದಾನ ಹಾಗೂ ಸದಸ್ಯತ್ವ ನೊಂದಣಿ ಅಬಿಯಾನದ ಉದ್ಘಾಟನಾ ಸಮಾರಂಭ:

   ಉದ್ಘಾಟನೆ:
   ಡಾ. ಜಿ. ಪರಮೇಶ್ವರ, ಉಪ ಮುಖ್ಯಮಂತ್ರಿಗಳು

   ಉಪಸ್ಥಿತಿ:
   ಡಿ.ವಿ. ಸದಾನಂದಗೌಡ, ಕೇಂದ್ರ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವರು

   ಅಧ್ಯಕ್ಷತೆ:
   ಕೃಷ್ಣಭೈರೇಗೌಡ, ಗ್ರಾಮೀಣಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು.

   ದಿನಾಂಕ: 15–11–2018, ಗುರುವಾರ ಸಮಯ: ಬೆಳಿಗ್ಗೆ 11–00 ಗಂಟೆಗೆ.

   ಸ್ಥಳ: ಎಂ.ಎಸ್.ಆರ್. ರಿಗಾಲಿಯ ಎಲಿಮೆಂಟ್ಸ್ ಮಾಲ್, ಥಣಿಸಂದ್ರ ಮುಖ್ಯರಸ್ತೆ,
   ನಾಗವಾರ ಸಿಗ್ನಲ್ ಹತ್ತಿರ, ಬೆಂಗಳೂರು

3. ಕೃಷಿಮೇಳ – 2018

ಉದ್ಘಾಟನೆ:
ವಜುಭಾಯಿ ವಾಲಾ, ರಾಜ್ಯಪಾಲರು

ಮುಖ್ಯ ಅತಿಥಿ:
ಎನ್.ಹೆಚ್. ಶಿವಶಂಕರ ರೆಡ್ಡಿ, ಕೃಷಿ ಸಚಿವರು

ಅಧ್ಯಕ್ಷತೆ:
ಕೃಷ್ಣಬೈರೇಗೌಡ. ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್, ಕಾನೂನು, ನ್ಯಾಯ ಮತ್ತು ಮಾನವ ಹಕ್ಕು ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು.

ದಿನಾಂಕ: 15–11–2018, ಗುರುವಾರ ಸಮಯ: ಬೆಳಿಗ್ಗೆ 11–00 ಗಂಟೆಗೆ.

ಸ್ಥಳ: ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿ.ಕೆ.ವಿ.ಕೆ.), ಬೆಂಗಳೂರು.

**ಸೂಚನೆ:** ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು ವಾಹನವು ಅಂದು ಬೆಳಿಗ್ಗೆ 10.00 ಗಂಟೆಗೆ ನಗರದ ಕಬ್ಬನ್ ಪಾರ್ಕ್ ಆವರಣದಲ್ಲಿರುವ ಪ್ರೆಸ್‌ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕ: ಡಾ. ಕೆ. ಶಿವರಾಮು, ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾತಜ್ಞರು.

ಮೊಬೈಲ್ ಸಂಖ್ಯೆ 9972035456/8277810930

ಸಂಖ್ಯೆ:

# ಪತ್ರಿಕಾ ಪ್ರಕಟಣೆ

## ನ.17ರಿಂದ ರಾಜ್ಯದಲ್ಲಿ ಕೇಂದ್ರ ಬರ ಅಧ್ಯಯನ ತಂಡದ ಪ್ರವಾಸ

**–ಕಂದಾಯ ಸಚಿವ ದೇಶಪಾಂಡೆ**

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಕೇಂದ್ರ ಸರಕಾರದ ಕೃಷಿ ಇಲಾಖೆಯ ಜಂಟಿ ಕಾರ್ಯದರ್ಶಿ ಅಮಿತಾಬ್ ಗೌತಮ್ ನೇತೃತ್ವದ ಬರ ಅಧ್ಯಯನ ತಂಡವು ನ.17 ರಿಂದ 19ರ ವರೆಗೆ ರಾಜ್ಯದ ಬರಪೀಡಿತ ಜಿಲ್ಲೆಗಳಿಗೆ ಭೇಟಿ ನೀಡಲಿದೆ ಎಂದು ಕಂದಾಯ ಸಚಿವ ಆರ್.ವಿ.ದೇಶಪಾಂಡೆ ತಿಳಿಸಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿರುವ ಅವರು, "ಒಟ್ಟು 10 ಸದಸ್ಯರಿರುವ ಈ ತಂಡವು ಮೂರು ಉಪತಂಡಗಳಾಗಿ ರಾಜ್ಯದ ನಾನಾ ಭಾಗಗಳಿಗೆ ಭೇಟಿ ನೀಡಲಿವೆ. ಗೌತಮ್ ಅವರ ನೇತೃತ್ವದ ಮೊದಲನೇ ತಂಡವು ಮೊದಲ ದಿನವಾದ 17ರಂದು ಯಾದಗಿರಿ, ರಾಯಚೂರು, ಎರಡನೇ ದಿನವಾದ 18ರಂದು ಬಳ್ಳಾರಿ ಮತ್ತು ದಾವಣಗೆರೆ ಜಿಲ್ಲೆಗಳಿಗೆ ಭೇಟಿ ನೀಡಲಿದೆ.

ಇದೇ ರೀತಿಯಲ್ಲಿ ಡಾ.ಮಹೇಶ್ ನೇತೃತ್ವದ ಎರಡನೇ ತಂಡವು ಈ ಅವಧಿಯಲ್ಲಿ ಧಾರವಾಡ, ಬೆಳಗಾವಿ, ಬಾಗಲಕೋಟೆ, ವಿಜಯಪುರ ಮತ್ತು ಗದಗ ಜಿಲ್ಲೆಗಳಿಗೆ ಭೇಟಿ ನೀಡಲಿದೆ. ಹಾಗೆಯೇ, ಮಾನಸ್ ಚೌದರಿ ನೇತೃತ್ವದ ಮೂರನೇ ತಂಡವು ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳಿಗೆ ತೆರಳಲಿದೆ ಎಂದು ಕಂದಾಯ ಸಚಿವರು ತಿಳಿಸಿದ್ದಾರೆ.

ಕೇಂದ್ರದ ಈ ಅಂತರ್–ಸಚಿವಾಲಯ ತಂಡವು ತಮ್ಮ ತಮ್ಮ ಜಿಲ್ಲೆಗಳಿಗೆ ಬಂದಾಗ, ಆಯಾ ಭಾಗದ ಜನಪ್ರತಿನಿಧಿಗಳು ಬರ ಮತ್ತು ಅದರಿಂದಾಗಿರುವ ಹಾನಿ/ನಷ್ಟದ ಬಗ್ಗೆ ತಂಡದ ಸದಸ್ಯರಿಗೆ ಸೂಕ್ತ ಮಾಹಿತಿ ನೀಡಬಹುದು.

ರಾಜ್ಯದಲ್ಲಿ ಈಗಾಗಲೇ 100 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಅಲ್ಲದೆ, ಅಕ್ಟೋಬರ್ 30ರಂದು ತಾವು ಮತ್ತು ಕೃಷಿ ಸಚಿವ ಎನ್.ಎಚ್.ಶಿವಶಂಕರ ರೆಡ್ಡಿ ದೆಹಲಿಗೆ ಹೋಗಿ, ಕೇಂದ್ರ ಗೃಹ ಸಚಿವ ರಾಜನಾಥ್ ಸಿಂಗ್ ಅವರಿಗೆ ಬರ ಪರಿಸ್ಥಿತಿಯನ್ನು ನಿಭಾಯಿಸಲು ಎನ್.ಡಿ.ಆರ್.ಎಫ್ ನಿಧಿಯಿಂದ 2,434 ಕೋಟಿ ರೂ.ಗಳನ್ನು ಪರಿಹಾರವಾಗಿ ಒದಗಿಸಲು ಮನವಿ ಸಲ್ಲಿಸಿದ್ದೆವು. ಈ ಸಂದರ್ಭದಲ್ಲಿ ಬರದಿಂದಾಗಿ ಒಟ್ಟು 16,662 ಕೋಟಿ ರೂ.ಗಳಿಗೂ ಹೆಚ್ಚು ಮೊತ್ತದ ನಷ್ಟ ರಾಜ್ಯದಲ್ಲಿ ಸಂಭವಿಸಿರುವುದನ್ನು ಸಿಂಗ್ ಅವರ ಗಮನಕ್ಕೆ ತಂದಿದ್ದೇವೆ ಎಂದು ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಿವಂಗತ ಪಂಡಿತ್ ಜವಾಹರಲಾಲ್ ನೆಹರೂ ಅವರ ಭಾವಚಿತ್ರಕ್ಕೆ

# ಮುಖ್ಯಮಂತ್ರಿಗಳಿಂದ ಮಾಲಾರ್ಪಣೆ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಮಾಜಿ ಪ್ರಧಾನ ಮಂತ್ರಿಗಳಾದ ದಿವಂಗತ ಪಂಡಿತ್ ಜವಾಹರಲಾಲ್ ನೆಹರೂ ಅವರ 129 ನೇ ಜನ್ಮ ದಿನದ ಅಂಗವಾಗಿ ಇಂದು ವಿಧಾನಸೌಧ ಆವರಣದಲ್ಲಿರುವ ಅವರ ಪ್ರತಿಮೆ ಬಳಿಯ ಭಾವಚಿತ್ರಕ್ಕೆ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ದೇಶದ ಮೊದಲ ಪ್ರಧಾನ ಮಂತ್ರಿಯಾಗಿದ್ದ ಪಂಡಿತ್ ಜವಾಹರಲಾಲ್ ನೆಹರೂ ಅವರು ಮಕ್ಕಳ ಸಮೂಹಕ್ಕೆ ಕಣ್ಮಣಿಯಾಗಿದ್ದರು. ಅಂದಿನ ಕ್ಲಿಷ್ಟಕರ ಸಂದರ್ಭದಲ್ಲಿ ದೇಶದ ಅಭಿವೃದ್ಧಿಗೆ ಅವರ ಕೊಡುಗೆ ಅಪಾರ ಎಂದು ಅವರು ಈ ಸಂದರ್ಭದಲ್ಲಿ ಸ್ಮರಿಸಿದರು.

ಸರ್ಕಾರದ ಮುಖ್ಯ ಕಾರ್ಯದರ್ಶಿ ವಿಜಯ್‌ಭಾಸ್ಕರ್ ಅವರು ಕೂಡಾ ದಿವಂಗತ ಪಂಡಿತ್ ಜವಾಹರಲಾಲ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ನಮನ ಸಲ್ಲಿಸಿದರು. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅಂಜುಂ ಪರ್ವೇಜ್ ಸೇರಿದಂತೆ ಸಚಿವಾಲಯದ ಹಿರಿಯ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಸಂಖ್ಯೆ:

# ನಂದಿನಿ ಹಾಲಿನ ಮಾರಾಟ ದರ ಸದ್ಯಕ್ಕೆ ಹೆಚ್ಚಳವಿಲ್ಲ

**– ಸಚಿವ ವೆಂಕಟಗೌಡ ನಾಡಗೌಡ**

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ನಂದಿನಿ ಹಾಲಿನ ಮಾರಾಟ ದರವನ್ನು ಸದ್ಯಕ್ಕೆ ಹೆಚ್ಚಳ ಮಾಡಲಾಗುವುದಿಲ್ಲವೆಂದು ಪಶುಸಂಗೋಪನಾ ಸಚಿವ ವೆಂಕಟಗೌಡ ನಾಡಗೌಡ ಅವರು ತಿಳಿಸಿದರು.

ಅವರು ಇಂದು ವಿಧಾನಸೌಧದ ತಮ್ಮ ಕಚೇರಿಯಲ್ಲಿ ಭೇಟಿಮಾಡಿದ ಪತ್ರಕರ್ತರೊಡನೆ ಮಾತನಾಡುತ್ತಾ ಹಾಲು ಉತ್ಪಾದಕರಿಗೆ ಪ್ರತಿ ಲೀಟರ್ ಹಾಲಿಗೆ ಈಗ ನೀಡುತ್ತಿರುವ 5 ರೂ. ಪ್ರೋತ್ಸಾಹ ಹಣ ಮುಂದುವರೆಸಿಕೊಂಡು ಹೋಗಲಾಗುವುದು ಎಂದರು. ಸದ್ಯಕ್ಕೆ ಕೆ.ಎಂ.ಎಫ್‌ನಿಂದ ಉತ್ಪಾದನೆಗೊಳ್ಳುತ್ತಿರುವ ಹಾಲಿನ ಉತ್ಪನ್ನಗಳಿಗೆ ಮಾರುಕಟ್ಟೆ ವಿಸ್ತೀರ್ಣಕ್ಕೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿಯಿರುವುದರಿಂದ ಹೊರ ರಾಜ್ಯಗಳಿಗೆ ರಾಜ್ಯದಿಂದ ಮೇವು ಸಾಗಾಟ ಮಾಡುವುದನ್ನು ನಿರ್ಭಂಧಿಸಿದ್ದು, ಈ ಸಂಬಂಧ ಈಗಾಗಲೇ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು. ಹಾಲಿ ಇರುವ ಮೇವು ಅನ್ನು ಸಂಗ್ರಹಿಸಿಟ್ಟು ಅಗತ್ಯವಿರುವ ಕಡೆ ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ. ಸಧ್ಯಕ್ಕೆ ರಾಜ್ಯದಲ್ಲಿ ಎಲ್ಲೂ ಕೂಡಾ ಮೇವಿನ ಕೊರತೆ ಕಂಡು ಬಂದಿಲ್ಲ ಎಂದರು.

ಜಾನುವಾರು ಮೇವಿನ ಉತ್ಪಾದನೆಗಾಗಿ ರೈತರಿಗೆ 15 ಕೋಟಿ ರೂ. ಮೊತ್ತದ ಮೇವಿನ ಬೀಜಗಳನ್ನು ವಿತರಿಸಲಾಗಿದೆ ಎಂದು ತಿಳಿಸಿದ ಅವರು ಹಾಲು ಕರೆಯುವ ಎಲ್ಲಾ ಹಸುಗಳಿಗೆ ಅವುಗಳ ಗುರುತನ್ನು ಪತ್ತೆ ಹಚ್ಚುವ ಸಂಬಂಧ ಚಿಪ್‌ಗಳನ್ನು ಅಳವಡಿಸಲಾಗಿದೆ. ಪಶಸಂಗೋಪನಾ ಕಚೇರಿ ಹಾಗೂ ಪಶು ಆಸ್ಪತ್ರೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಎಂದರು.

ರೈತರಿಂದ ನೇರವಾಗಿ ಮೆಕ್ಕೆಜೋಳ ಖರೀದಿಸಲು ರಾಜ್ಯ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ. ಪ್ರತಿ ಕ್ವಿಂಟಾಲ್‌ಗೆ 1,450/- ರೂ. ನೀಡಿ ಖರೀದಿ ಮಾಡಲು ಚಿಂತನೆ ಮಾಡಲಾಗಿದೆ ಎಂದರು.

ಸಂಖ್ಯೆ:

# ಒಂದು ದಿನದ ವಿಚಾರ ಸಂಕಿರಣ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆವತಿಯಿಂದ ನವೆಂಬರ್ 20ರಂದು ಮೈಸೂರಿನ ಆಡಳಿತ ತರಬೇತಿ ಸಂಸ್ಥೆಯಲ್ಲಿ ರಾಜ್ಯದಲ್ಲಿನ ಮೂಲನಿವಾಸಿ ಬುಡಕಟ್ಟು ಸಮುದಾಯಗಳಾದ ಜೇನುಕುರುಬ ಮತ್ತು ಕೊರಗ ಸಮುದಾಯಗಳ ಆಚಾರ-ವಿಚಾರ ಮತ್ತು ನಂಬಿಕೆಗಳು" (CUSTOMS, BELIEFS AND PRACTICES OF JENUKURUBA AND KORAGA PARTICULARLY

VULNERABLE TRIBAL GROUPS IN KARNATAKA) ಎಂಬ ವಿಷಯ ಕುರಿತು ಒಂದು ದಿನದ ಪ್ರಾದೇಶಿಕ ವಿಚಾರ ಸಂಕಿರಣವನ್ನು ಆಯೋಜಿಸಲಾಗಿದೆ.

ಆಸಕ್ತ ಸಂಶೋಧನಾಸಕ್ತರು/ವಿದ್ಯಾರ್ಥಿಗಳು, ಸಂಶೋಧನಾ ವಿದ್ವಾಂಸರು, ಉಪನ್ಯಾಸಕರು ಮತ್ತು ಪ್ರಾಧ್ಯಾಪಕರು ತಮ್ಮ ಸಾರಾಂಶವನ್ನು ನವೆಂಬರ್ 12 ರ ಒಳಗೆ ಕಚೇರಿಯ ಇಮೇಲ್ email:trimysore@gmail.com ಮೂಲಕ ಕಳುಹಿಸಿಕೊಡಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

ಸಂಖ್ಯೆ:

# ರಾಷ್ಟ್ರೀಯ ಗ್ರಂಥಾಲಯ ಸಪ್ತಾಹ
# ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

2018–19 ನೇ ಸಾಲಿಗೆ ರಾಷ್ಟ್ರೀಯ ಗ್ರಂಥಾಲಯ ಸಪ್ತಾಹದ ಅಂಗವಾಗಿ ಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ.

ನವೆಂಬರ್ 19 ರಂದು ಶಂಕರಪುರಂ ಶಾಖಾ ಗ್ರಂಥಾಲಯ ಕರಣಿಕರ ರಸ್ತೆ, ಶಂಕರಪುರಂ, ಬೆಂಗಳೂರು – 560 004 ಇಲ್ಲಿ ಬೆಳಿಗ್ಗೆ 11.30 ಗಂಟೆಯಿಂದ 12.30 ಗಂಟೆಯವರೆಗೆ 3 ರಿಂದ 5 ನೇ ತರಗತಿಯ ವಿದ್ಯಾರ್ಥಿಗಳಿಗೆ ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆಯನ್ನು ಹಮ್ಮಿಕೊಂಡಿದೆ.

ಅದೇ ದಿನ ಸಹಕಾರ ನಗರ ಶಾಖಾ ಗ್ರಂಥಾಲಯ ನಂ 834/3, "ಎ" ಬ್ಲಾಕ್, ಸಹಕಾರ ನಗರ, ಬೆಂಗಳೂರು – 560 092 ಇಲ್ಲಿ ಬೆಳಿಗ್ಗೆ 11.30 ಗಂಟೆಯಿಂದ 12.30 ಗಂಟೆಯವರೆಗೆ ನೆನಪಿನ ಸ್ಪರ್ಧೆ ಹಾಗೂ ಲಕ್ಕಸಂದ್ರ ಶಾಖಾ ಗ್ರಂಥಾಲಯ, ಬಿ.ಬಿ.ಎಂ.ಪಿ, ಸಮುದಾಯ ಭವನ, ಲಕ್ಕಸಂದ್ರ, ಬೆಂಗಳೂರು – 560 029 ಇಲ್ಲಿ ಬೆಳಿಗ್ಗೆ 11.30 ಗಂಟೆಯಿಂದ 12.30 ಗಂಟೆಯವರೆಗೆ ಆಶುಭಾಷಣ ಸ್ಪರ್ಧೆಗಳನ್ನು ಈ ಗ್ರಂಥಾಲಯಗಳಲ್ಲಿ ಏರ್ಪಡಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು, ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ನಗರ ಕೇಂದ್ರ ಗ್ರಂಥಾಲಯದ ಪ್ರಕಟಣೆ ತಿಳಿಸಿದೆ.

ಸಂಖ್ಯೆ:

# ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯಕ್ರಮ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಭಾರತ ಚುನಾವಣಾ ಆಯೋಗದ ನಿರ್ದೇಶನಗಳನ್ವಯ ಕರ್ನಾಟಕ ರಾಜ್ಯದ 224 ವಿಧಾನಸಭಾ ಕ್ಷೇತ್ರಗಳ ಪೈಕಿ ಉಪ ಚುನಾವಣೆ ನಡೆದ 9–ಬಳ್ಳಾರಿ, 16–ಶಿವಮೊಗ್ಗ, 20–ಮಂಡ್ಯ ಲೋಕಸಭಾ ಕ್ಷೇತ್ರಗಳಲ್ಲಿ ಒಳಗೊಳ್ಳುವ ವಿಧಾನಸಭಾ ಕ್ಷೇತ್ರಗಳು ಹಾಗೂ 21–ಜಮಖಂಡಿ, ವಿಧಾನಸಭಾ ಕ್ಷೇತ್ರ ಮತ್ತು 183– ರಾಮನಗರ ವಿಧಾನಸಭಾ ಕ್ಷೇತ್ರ ಒಟ್ಟು 26 ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಗಳನ್ನು ಪರಿಷ್ಕರಿಸಲಾಗುತ್ತಿದ್ದು, ಇಂದು 26 ವಿಧಾನಸಭಾ ಕ್ಷೇತ್ರಗಳಲ್ಲಿ ಕರಡು ಮತದಾರರ ಪಟ್ಟಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿ, ಮತದಾರರ ನೋಂದಣಾದಿಕಾರಿಗಳ ಕಚೇರಿ, ಸಹಾಯಕ ಮತದಾರರ ನೋಂದಣಾಧಿಕಾರಿಳ ಕಚೇರಿ ಹಾಗೂ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮತಗಟ್ಟೆಗಳಲ್ಲಿ ಸಾರ್ವಜನಿಕರ ತಿಳುವಳಿಕೆಗಾಗಿ ಪ್ರಕಟಿಸಲಾಗಿದೆ. ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ವೇಳಾಪಟ್ಟಿ ಇಂತಿದೆ.

ನವೆಂಬರ್ 10 ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸುವ ದಿನಾಂಕ.

ನವೆಂಬರ್ 10 ರಿಂದ 20 ರವರೆಗೆ ಹೆಸರು ಸೇರಿಸಲು, ತಿದ್ದುಪಡಿ ಮಾಡಲು ಮತ್ತು ತೆಗೆದುಹಾಕಲು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸುವ ಅವಧಿ.

ಡಿಸೆಂಬರ್ 31 ರಂದು ಹೆಸರು ಸೇರ್ಪಡೆ, ತಿದ್ದುಪಡಿ ಮತ್ತು ತೆಗೆದುಹಾಕಲು ಸ್ವೀಕೃತವಾಗಿರುವ ಅರ್ಜಿಗಳನ್ನು ಇತ್ಯರ್ಥಪಡಿಸುವ ಕೊನೆಯ ದಿನಾಂಕ.

ಜನವರಿ 14, 2019 ಡೇಟಾ ಬೇಸ್ ಕಾಲೋಚಿತಗೊಳಿಸಿ ಪೂರಕಪಟ್ಟಿಗಳ ಮುದ್ರಣದ ದಿನಾಂಕ ಹಾಗೂ ಜುನವರಿ 15 ಭಾವಚಿತ್ರವಿರುವ ಮತದಾರರ ಪಟ್ಟಿಗಳ ಅಂತಿಮ ಪ್ರಕಟಣೆಯ ದಿನಾಂಕವಾಗಿರುತ್ತದೆ.

1. ರಾಜಕೀಯ ಪಕ್ಷಗಳ ಸಹಕಾರ:

ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಯನ್ನು ಮುಖ್ಯ ಚುನಾವಣಾಧಿಕಾರಿಗಳು ಕರ್ನಾಟಕ ರಾಜ್ಯ ಇವರ ಅಧಿಕೃತ ಜಾಲತಾಣ www.ceokarnataka.kar.nic.com ನಲ್ಲಿ ಪಿ.ಡಿ.ಎಫ್ ಆವೃತ್ತಿಯನ್ನು ಹಾಕಲಾಗಿದ್ದು, ಸಾರ್ವಜನಿಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾದ ಬಗ್ಗೆ ಪರಿಶೀಲಿಸುವುದು ಸರಿಯಾದ ಹಾಗೂ ಹೆಸರನ್ನು ನಮೂದುಗಳೊಂದಿಗೆ ನೋಂದಾಯಿಸಿದ ಬಗ್ಗೆ ಖಚಿತಪಡಿಸಿಕೊಳ್ಳುವುದು.

2. ಅರ್ಜಿ ಸಲ್ಲಿಸುವ ವಿಧಾನ ಪ್ರತಿ:

ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ನೇಮಕವಾಗಿರುವ ಅಧಿಸೂಚಿತ ಮತದಾರರ ನೋಂದಣಾದಿಕಾರಿಗಳು/ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ನಿಗದಿತ ನಮೂನೆಗಳಲ್ಲಿ ಅವಶ್ಯಕ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬೇಕು.

1. ನಮೂನೆ – 6 – ಹೆಸರು ಸೇರ್ಪಡೆ.
2. ನಮೂನೆ – 7 – ಹೆಸರು ತೆಎದುಹಾಕುವಿಕೆ.
3. ನಮೂನೆ – 8 –ಮುದ್ರಿತನಮೂದುಗಳಲ್ಲಿ ತಿದ್ದುಪಡಿಗಳು.
4. ನಮೂನೆ – 8A – ಅದೇ ವಿಧಾನಸಭಾ ಕ್ಷೇತ್ರದಲ್ಲಿ ಒಂದು ಮತಗಟ್ಟೆಯ ವ್ಯಾಪ್ತಿಯಿಂದ ಇನ್ನೋಂದು ಮತಗಟ್ಟೆಗೆ ಹೆಸರು ವರ್ಗಾವಣೆ (Transposition)

ಮತದಾರರ ಪಟ್ಟಿಗಳ ಪರಿಷ್ಕರಣೆಯ ವೇಳಾಪಟ್ಟಿಯ ಬಗ್ಗೆ ಸಾಕಷ್ಟು ಪ್ರಚಾರ ನೀಡಲಾಗಿದ್ದು, ರಾಜ್ಯ ಮಟ್ಟದಲ್ಲಿ ಮುಖ್ಯ ಚುನಾವಣಾಧಿಕಾರಿಗಳು ಕರ್ನಾಟಕ ಅವರು ಪತ್ರಿಕಾಗೋಷ್ಠಿ ನಡೆಸಿ ಸವಿಸ್ತಾರವಾಗಿ ವಿವರಿಸಿರುತ್ತಾರೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯಾಯ ತಹಸೀಲ್ದಾರರು ಮಾಧ್ಯಮದ ಪ್ರಚಾರ ಕೈಗೊಳ್ಳುತ್ತಾರೆ. ಅಲ್ಲದೆ, ಅವಶ್ಯಕ ಎಲ್ಲಾ ಅರ್ಜಿ ನಮೂನೆಗಳು ಅಯಾ ಮತದಾರರ ನೊಂದಣಾಧಿಕಾರಿಗಳ ಕಾರ್ಯಾಲಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದ್ದು ಸಾರ್ವಜನಿಕರು ಉಚಿತವಾಗಿ ನೀಡುವ ಅರ್ಜಿಗಳನ್ನು ಅವಶ್ಯಕತೆಗೆ ಅನುಸಾರವಾಗಿ ಪಡೆಯಲು ಕೋರಲಾಗಿದೆ.

## ಮತದಾರರ ಸೇರ್ಪಡೆ ತಿದ್ದುಪಡಿ ಹಾಗೂ ತೆಗೆದುಹಾಕುವಿಕೆ:

1. ಎಲ್ಲಾ ಅರ್ಹ ವ್ಯಕ್ತಿಗಳನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಬೇಕಾಗಿದ್ದು, ಈ ದಿಸೆಯಲ್ಲಿ, ವಿಶೇಷವಾಗಿ 18/19 ವಯಸ್ಸಿನ ಯುವಕ/ಯುವತಿಯರ ಹೆಸರುಗಳನ್ನು ಪ್ರತಿಶತ 100% ರಂತೆ ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ಹೆಚ್ಚಿನ ಪ್ರಚಾರ ಕೈಗೊಳ್ಳಬೇಕಾಗುತ್ತದೆ.
2. ಅದರಂತೆ ಮತದಾರರ ಪಟ್ಟಿಯಲ್ಲಿ ನೋಂದಾಣಿಯಾಗಿರುವ ಮತದಾರರು ಮೃತರಾಗಿದ್ದಲ್ಲಿ/ವಲಸೆಹೋಗಿದ್ದಲ್ಲಿ ಎರಡು ಕಡೆಗೆ ಹೆಸರುಗಳು ಇದ್ದಲ್ಲಿ ಅಂತಹ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು ಕ್ರಮ ಜರುಗಿಸಬೇಕಾಗುತ್ತದೆ.
3. ಮತದಾರರ ನೋಂದಣಿ ವಿವರಗಳು/ನಮೂದುಗಳು ತಪ್ಪಾಗಿದ್ದಲ್ಲಿ ಅವುಗಳನ್ನು ತಿದ್ದುಪಡಿ ಮೂಲಕ ಸರಿಪಡಿಸುವುದು.

ಎಲ್ಲಾ ಅರ್ಹ ಮತದಾರರಿಗೆ ಗುರುತಿನ ಚೀಟಿ:

ಪ್ರಜಾ ಪ್ರಾತಿನಿಧ್ಯ ಕಾಯ್ದೆ ಹಾಗೂ ಮತದಾರರ ನೋಂದಣಿ ನಿಯಮಾವಳಿಗಳನ್ವಯ ಎಲ್ಲಾ ಅರ್ಹ ಮತದಾರರಿಗೆ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ನೀಡಲಾಗಿದ್ದು, ಪ್ರಸ್ತುತ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ ಅರ್ಹತಾ ದಿನಾಂಕ: 01–01–2019 ರಡಿ ಹೊಸದಾಗಿ ಸೇರ್ಪಡೆಯಾಗುವ ಎಲ್ಲಾ ಮತದಾರರಿಗೆ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ನೀಡಲಾಗುವುದು.

ಮುಂಬರುವ ಲೋಕಸಭಾ ಚುನಾವಣೆ 2019 ರ ನಿಮಿತ್ತ ಎಲ್ಲಾ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲು ಹಾಗೂ ದೋಷಾರಹಿತ ಮತದಾರರ

ಪಟ್ಟಿಯನ್ನು ತಯಾರಿಸಲು ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಅವಶ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮತದಾರರ ಪಟ್ಟಿಗಳು/ಮತದಾರರ ಗುರುತಿನ ಚೀಟಿ, ಇತ್ಯಾದಿ ವಿವರಗಳ ಮಾಹಿತಿ ಅವಶ್ಯವಿದ್ದಲ್ಲಿ ಸಂಬಂಧಿಸಿದ ಜಿಲ್ಲಾ ಚುನಾವಣಾಧಿಕಾರಿಗಳು/ಮತದಾರರ ನೋಂದಾಣಾಧಿಕಾರಿಗಳು/ಸಹಾಯಕ ಮತದಾರರ

ನೋಂದಾಣಾಧಿಕಾರಿಗಳನ್ನು ಸಹಾಯವಾಣಿ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ:

# ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಕೃಷಿ ಸಚಿವ ಎನ್.ಹೆಚ್. ಶಿವಶಂಕರ ರೆಡ್ಡಿ ಅವರು ನವೆಂಬರ್ 15 ರಂದು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ (ಮಂಗಳೂರು) ಪ್ರವಾಸ ಕೈಗೊಂಡು, ನವೆಂಬರ್ 16 ರಂದು ನಗರಕ್ಕೆ ಹಿಂತಿರುಗಲಿದ್ದಾರೆ ಎಂದು ಆಧಿಕೃತ ಪ್ರಕಟಣೆ ತಿಳಿಸಿದೆ.

ಸಂಖ್ಯೆ:

# ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಆರ್. ವಿ. ದೇಶಪಾಂಡೆ ಅವರು ನವೆಂಬರ್ 16 ಮತ್ತು 17 ರಂದು ಧಾರವಾಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಸರ್ಕಾರದ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ:

# ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮ

## ತಿಂಗಳ ಅತಿಥಿಯಾಗಿ ಮಾಜಿ ಪ್ರಧಾನಮಂತ್ರಿ ಹೆಚ್.ಡಿ. ದೇವೇಗೌಡ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನವೆಂಬರ್ 17 ರಂದು ಸಂಜೆ 4.00 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಳ್ಳಲಾಗಿರುವ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮದಲ್ಲಿ ತಿಂಗಳ ಅತಿಥಿಯಾಗಿ ಭಾರತದ ಮಾಜಿ ಪ್ರಧಾನ ಮಂತ್ರಿ ಹೆಚ್.ಡಿ. ದೇವೇಗೌಡ ಅವರು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

**PRESS NOTE**

**Patients seeking claim of compensation who has been implanted with ASR Hip Implants of Depuy International Ltd (Now Johnson and Johnson) before August, 2010 can approach the State Level Committee.**

The Government of India has constituted a Central Expert Committee and State Level Committees to address the claim for compensation who has been implanted with ASR Hip Implants of Depuy International Ltd (Now Johnson and Johnson) before August, 2010.

Therefore, the concerned patients are advised to approach the State Level Committee with detailed application form (check list available on www.cdsco.gov.in) to support their claim.

The contact details of the State Level Committee is as under:

Address:

Sri. AmareshTumbagi,
Drugs Controller (a/c) / Member Secretary of State Level Committee to address the claim for compensation who has been implanted with ASR Hip Implants of Depuy International Ltd (Now Johnson and Johnson) before August, 2010
Drugs Control Department, Palace Road, Bangalore-560001.

Mail Id: dckarnataka@gmail.com

Phone number: 080-22264760/22268974/22262846

Mobile number: 9448585884